ಆ) ಉಡುಪಿ ಜಿಲ್ಲೆಯಲ್ಲಿ ಹೊಸ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಸ್ಥಾಪನೆ ಮಾಡಬೇಕಾದಲ್ಲಿ ದಕ್ಷಿಣ ಕನ್ನಡ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಮಹಾಸಭೆಯಲ್ಲಿ ಸಹಕಾರ ಸಂಘಗಳ ಕಾಯ್ದೆ ಕಲಂ 14(1) ರೀತ್ಯಾ 2/3ನೇ ಬಹುಮತದಿಂದ ತೀರ್ಮಾನಿಸಬೇಕಾಗಿದೆ. ಅದರಂತೆ ಎರಡು ಬಾರಿ ಬ್ಯಾಂಕಿನ ಮಹಾಸಭೆಯಲ್ಲಿ ದಿನಾಂಕ 14–3–2001 ಹಾಗೂ 25–9–2004ರಂದು ವಿಷಯ ಮಂಡಿಸಿದ್ದು, ಈ ಬಗ್ಗೆ ಮೇಲಿನ ಕಾಯ್ದೆಯಂತೆ ಮಹಾಸಭೆಯ ಒಪ್ಪಿಗೆಯಾಗಿಲ್ಲ. ಆದುದರಿಂದ ಹೊಸ ಬ್ಯಾಂಕ್ ಸ್ಥಾಪನೆಯಾಗಿಲ್ಲ.

ಇ) ಉದ್ಭವಿಸುವುದಿಲ್ಲ.

593(1261) ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ರಹ್ಮಾವರ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಜಿಲ್ಲೆಯ ಸಹಕಾರಿ ಸಂಘಗಳು ಎಷ್ಟು ಠೇವಣಿ ಇಟ್ಟಿವೆ;

ಆ) ಇದನ್ನು ಹಿಂದಿರುಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ;

ಇ) ಕಾರ್ಖಾನೆಯ ಪುನಶ್ಚೇತನಕ್ಕೆ ಸರ್ಕಾರದ ಯೋಜನೆಯೇನಾದರೂ ಇದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ದಕ್ಷಿಣ ಕನ್ನಡ ಸಹಕಾರ ಸಕ್ಕರೆ ಕಾರ್ಖಾನೆ (ನಿ) ಬ್ರಹ್ಮಾವರ. ಉಡುಪಿ ಜಿಲ್ಲೆ ಇದರ 82 ಸಹಕಾರಿ ಸಂಘಗಳು ರೂ. 5.88 ಕೋಟಿಗಳಷ್ಟು ಠೇವಣಿಯನ್ನಿಟ್ಟಿರುತ್ತವೆ.

ಆ) ಇಲ್ಲ.

ಇ) ದಕ್ಷಿಣ ಕನ್ನಡ ಸಹಕಾರಿ ಸಕ್ಕರೆ ಕಾರ್ಖಾನೆ (ನಿ) ಬ್ರಹ್ಮಾವರ, ಉಡುಪಿ ಜಿಲ್ಲೆ ಇದನ್ನು ಪುನಶ್ಚೇತನಗೊಳಿಸುವ ಕುರಿತು ಸರ್ಕಾರಕ್ಕೆ ಸೂಕ್ತ ಸಲಹೆಗಳನ್ನು ಮಾಡಲು ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ಒಂದು ಉನ್ನತ ಮಟ್ಟದ ಸಮಿತಿಯನ್ನು ಸರ್ಕಾರವು ದಿನಾಂಕ 10–11–2004ರಲ್ಲಿ ರಚಿಸಿದ್ದು, ಈ ಸಮಿತಿಯು ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ.

594(1262) ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರವು ಹೊಸದಾಗಿ ಸರ್ವೀಸ್ ಟ್ಯಾಂಕ್ ನಿಯಮವನ್ನು ಜಾರಿಗೊಳಿಸಿರುವುದರಿಂದ ಸಹಕಾರಿ ರಂಗಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;